# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಉತ್ತರ ಕನ್ನಡ ಜಿಲ್ಲಾ ಪಂಚಾಯತ್‌ನ ಶಾಖಾ ಮುಖ್ಯಸ್ಥರಿಗೆ ಹೊಸ ವಾಹನ ಖರೀದಿಸಲು ಅನುಮತಿ ನೀಡುವ ಬಗ್ಗೆ - ಆದೇಶ.

ಓದಲಾಗಿದೆ:- ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರಕನ್ನಡ ಇವರ ಪತ್ರ ಸಂಖ್ಯೆ:ಜಿಪಂಆ/ಹೊಸವಾಹನ/ಸಿಆರ್/2021-22/3872, ದಿ:19.01.2022

ಪ್ರಸ್ತಾವನೆ:

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ ಇವರು ಮೇಲೆ ಓದಲಾದ ಪತ್ರದಲ್ಲಿ ಜಿಲ್ಲಾ ಪಂಚಾಯತ್ ಕಾರವಾರ ಕಛೇರಿಯಲ್ಲಿನ ಯೋಜನಾ ನಿರ್ದೇಶಕರು (ಡಿ.ರ್.ಡಿ.ಎ) ಹಾಗೂ ಮುಖ್ಯ ಯೋಜನಾಧಿಕಾರಿರವರಿಗೆ ಸರ್ಕಾರದಿಂದ ವಾಹನ ಸೌಲಭ್ಯವನ್ನು ಕಲ್ಪಿಸಿದ್ದರೂ ಬಳಸಲು ವಾಹನಗಳು ಲಭ್ಯವಿರುವುದಿಲ್ಲವೆಂದು ಉಪ ಕಾರ್ಯದರ್ಶಿ (ಆಡಳಿತ) ರವರು ಉಪಯೋಗಿಸುತ್ತಿರುವ ವಾಹನವು ತೀರ ಹಳೆಯದಾಗಿದ್ದು, ದೊಡ್ಡ ದುರಸ್ತಿಗೆ ಬಂದಿರುತ್ತದೆ ಎಂದು ತಿಳಿಸಿ, ಜಿಲ್ಲಾ ಪಂಚಾಯತ್ ಕಛೇರಿಗೆ ಕನಿಷ್ಟ ಎರಡು ಹೊಸ ವಾಹನಗಳನ್ನು ಜಿಲ್ಲಾ ಪಂಚಾಯತ್ ಅನಿರ್ಬಂಧಿತ ಅನುದಾನದಲ್ಲಿ ಖರೀದಿಸಲು ಅನುಮತಿ ಕೋರಿರುತ್ತಾರೆ.

ಸರ್ಕಾರವು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರಕನ್ನಡ ಇವರ ಪಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 268 ಕೆ.ಎಸ್.ಎಸ್. 2021(ಇ) , ಬೆಂಗಳೂರು, ದಿನಾಂಕ:18.03.2022

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು ಜಿಲ್ಲಾ ಪಂಚಾಯತ್ ಉತ್ತರ ಕನ್ನಡ ಕಛೇರಿಯಲ್ಲಿ ಉಪ ಕಾರ್ಯದರ್ಶಿ (ಆಡಳಿತ) ಮತ್ತು ಉಪ ಕಾರ್ಯದರ್ಶಿ (ಅಭಿವೃದ್ಧಿ) ಇವರುಗಳು ಪ್ರಸ್ತುತ ಉಪಯೋಗಿಸುತ್ತಿರುವ ವಾಹನಗಳನ್ನು ನಿರುಪಯುಕ್ತಗೊಳಿಸುವ ಷರತ್ತಿಗೊಳಪಟ್ಟು 2 (ಎರಡು) ಹೊಸ ವಾಹನಗಳನ್ನು ತಲಾ ಮೊತ್ತ ರೂ.6.50 ಲಕ್ಷ ಆರ್ಥಿಕ ಮಿತಿಯೊಳಗೆ (Ex-Show Room Rate) ಈ ಕೆಳಕಂಡ ಷರತ್ತಿಗೊಳಪಟ್ಟು ಖರೀದಿಸಲು ಅನುಮತಿ ನೀಡಿದೆ.

1. ಜಿಲ್ಲಾ ಪಂಚಾಯತ್ ನಿಧಿಯಿಂದ ವೆಚ್ಚ ಭರಿಸತಕ್ಕದ್ದು.

2

2. ಹೊಸ ವಾಹನವಗಳನ್ನು ಖರೀದಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಅಧಿನಿಯಮ ಹಾಗೂ ಅದರಡಿ ರಚಿಸಿರುವ ನಿಯಮಗಳನ್ನು ಪಾಲಿಸತಕ್ಕದ್ದು.
3. ಹೊಸ ವಾಹನ ಖರೀದಿಸುವ ಸಂದರ್ಭದಲ್ಲಿ ಇಂಧನ ಮಿತವ್ಯಯ ಹಾಗೂ ನಿರ್ವಹಣಾ ವೆಚ್ಚ ಕಡಿಮೆ ಹೊಂದಿರುವ ವಾಹನಗಳನ್ನು ಖರೀದಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಆಇ **97ವೆಚ್ಚ-6/2022** (೩), ದಿನಾಂಕ:**15.03.2022** ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

18/03/2022
(ಬಾಲಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ
(ಸೇವೆಗಳು-ಬಿ ಮತ್ತು ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ , ಬೆಂಗಳೂರು.
2. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕಾಳಿದಾಸ ಮಾರ್ಗ, ಕೆಂಪೇಗೌಡ ರಸ್ತೆ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರಕನ್ನಡ, ಕಾರವಾರ.
4. ಸರ್ಕಾರದ ಅಧೀನ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಶಾಖಾ ರಕ್ಷಾ ಕಡತ/ಗಣಕ ಕೋಶ/ಹೆಚ್ಚುವರಿ ಪ್ರತಿ

ಮಾಹಿತಿಗಾಗಿ

1. ಅಪರ ಮುಖ್ಯ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ